ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 12–9–2017

## ಪತ್ರಿಕಾ ಆಮಂತ್ರಣ

1. ಪತ್ರಿಕಾಗೋಷ್ಠಿ:

ಡಾ: ವಸುಂಧರಾ ಭೂಪತಿ,
ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ

ದಿನಾಂಕ: 13–09–2017, ಬುಧವಾರ, ಅಪರಾಹ್ನ: 12.00 ಗಂಟೆಗೆ
ಸ್ಥಳ: ಕನ್ನಡ ಪುಸ್ತಕ ಪ್ರಾಧಿಕಾರದ ಕಛೇರಿ, ಮೊದಲನೇ ಮಹಡಿ, ಕನ್ನಡ ಭವನ, ಬೆಂಗಳೂರು

2. **Press Conference:**

**FIMI Organizing a three-days Convention of "Mining, Exploration Convention & Trade Show (Mining Mazma 2017)**

**Mr. Sanjay K. Pattnaik, President, FIMI**

**Date : 13-09-2017, Wednesday, Time : 12.30 PM**

**Place : Hotel Chancery Pavilion, Residency Road, Bengaluru.**

## 3. Valedictory function

**National Symposium on "Emerging trends in plant health management in relation to climate change"**

**Chief Guests:**

**Prof. A.H. Rajasab, Vice Chancellor, Tumkur University, Tumkur.**

**Dr. A.B. Patil, Registrar, University of Agricultural Sciences, Bengaluru.**
**Dr. Dinesh Singh, Secretary, Indian Psychopathological Society, New Delhi.**

**<u>Presidential remarks</u>:**

**Dr. D.L. Maheswar, Vice Chancellor, University of Horticultural Sciences, Bagalkot.**

**Date : 13-09-2017, Wednesday, Time : 04.00 PM.**

**Place : College of Horticulture, Bengaluru – 560 065**

4. ಕಲಾ ಪ್ರದರ್ಶನ ಉದ್ಘಾಟನೆ
ರಾಷ್ಟ್ರೀಯ ಆಧುನಿಕ ಕಲಾ ಸಂಗ್ರಹಾಲಯ, ಬೆಂಗಳೂರು ಹಾಗೂ ದಿ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಕಾರ್ಟೂನಿಸ್ಟ್ ನಿಂದ ಆರ್.ಕೆ. ಲಕ್ಷ್ಮಣ್ ಅವರ ಅಪ್ರಕಟಿತ ಕೃತಿಗಳು.

ದಿನಾಂಕ: 13–9–2017, ಬುಧವಾರ, ಸಂಜೆ: 6–00 ಗಂಟೆಗೆ
ಸ್ಥಳ: ಮಾನಿಕ್ಯವೇಲು ಮ್ಯಾನ್‌ಷನ್ 49, ಅರಮನೆ ರಸ್ತೆ, ಬೆಂಗಳೂರು

<u>ಸಂಖ್ಯೆ 54/179</u>

# <u>ಪತ್ರಿಕಾ ಪ್ರಕಟಣೆ</u>

## <u>ಮಾರ್ಚ್ ಅಂತ್ಯದ ವೇಳೆಗೆ ಮಳೆ ಹಾನಿ, ಕಸ ವಿಲೇವಾರಿಗೆ ಅಗತ್ಯಕ್ರಮ: – ಸಚಿವ ಕೆ.ಜೆ. ಜಾರ್ಜ್</u>

ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ) :

ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ 842 ಕಿ.ಮೀ ಉದ್ದದ ಮಳೆ ನೀರುಗಾಲುವೆ ಕೈಗೆತ್ತಿಕೊಂಡು ಪ್ರಥಮ ಹಾಗೂ ಎರಡನೇ ಹಂತದ ಒಳಚರಂಡಿ ನೀರನ್ನು ಸಂಪೂರ್ಣವಾಗಿ ಹರಿದು ಹೋಗುವಂತೆ ಮಾಡಲು ಪ್ರಸಕ್ತವಾಗಿ 800 ಕೋಟಿ ರೂ. ವೆಚ್ಚದಲ್ಲಿ

132 ಕಿ.ಮೀ ಉದ್ದದ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಬೆಂಗಳೂರು ನಗರ ಅಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ಅವರು ಹೇಳಿದ್ದಾರೆ.

ವಿಧಾನಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಅಂಕಿ ಅಂಶಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು ಕಳೆದ 8-10 ದಿನಗಳಿಂದ ಬೆಂಗಳೂರು ನಗರದಲ್ಲಿ ಸುರಿದ ಬಾರಿ ಮಳೆಗೆ ಸಾರ್ವಜನಿಕ ಆಸ್ತಿಪಾಸ್ತಿ ಹಾನಿಯಾಗಿದ್ದು ಒಳಚರಂಡಿ ವ್ಯವಸ್ಥೆ ಸರಿಪಡಿಸುವ ಜೊತೆಗೆ ಒತ್ತುವರಿ ತೆರವು ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಇದುವರೆಗೆ 1225 ಕಡೆಯ ಒತ್ತುವರಿಯನ್ನು ತೆರವುಗೊಳಿಸಲಾಗಿದೆ. ಇನ್ನೂ 728 ಕಡೆ ತೆರವುಗೊಳಿಸುವ ವಿಚಾರದಲ್ಲಿ ಹಲವು ಪ್ರಕರಣಗಳು ನ್ಯಾಯಾಲಯದ ಮುಂದೆ ಇವೆ ಎಂದು ತಿಳಿಸಿದರು.

ನಗರದಲ್ಲಿ ಅತಿ ಹೆಚ್ಚು ಮಳೆಯಿಂದ ಆಗಿರುವ ಹಾನಿ ತಡೆಗೆ ಹಲವಾರು ಕ್ರಮಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಇದರ ಜೊತೆಗೆ ಕೋರಮಂಗಲ, ಜೆ.ಸಿ.ರಸ್ತೆ, ಶಾಂತಿನಗರ ಬಸ್ ನಿಲ್ದಾಣ, ಹೆಚ್‌ಎಸ್‌ಆರ್ ಲೇಔಟ್, ಮಡಿವಾಳ ಕೆರೆ, ಅರಕೆರೆ, ಕೆ.ಆರ್. ಪುರಂನ ನಂದಗೋಕುಲ ಬಡಾವಣೆಗಳಲ್ಲಿ ಮಳೆಯಿಂದ ಆಗಿರುವ ಹಾನಿಗೆ ಕಾಮಗಾರಿಗಳನ್ನು ಕೈಗೆತ್ತಿಗೊಂಡಿದ್ದು ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಕಸ ವಿಲೇವಾರಿ, ತ್ಯಾಜ್ಯ ಪರಿವರ್ತನೆ ಘಟಕವು ಬರುವ ಮಾರ್ಚ್ ವೇಳೆಗೆ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭವಾಗುವ ನಿರೀಕ್ಷೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಸ ಕಸವಿಲೆವಾರಿಗೆ ಏಳು ಕಾಂಪೋಸ್ಟ್ ಘಟಕಗಳನ್ನು ಆರಂಭಿಸಲಾಗಿದೆ, ಕಾಮಗಾರಿಯು ಪ್ರಗತಿಯಲ್ಲಿದೆ ಮುಂದಿನ ದಿನಗಳಲ್ಲಿ ನಗರಕ್ಕೆ ಬರುವ ನೀರನ್ನು ಮರು ಬಳಕೆ ಮಾಡುವ ಘಟಕಗಳನ್ನು ಸ್ಥಾಪಿಸಲು ನಗರ ಅಭಿವೃದ್ಧಿ ಇಲಾಖೆ ಕಾರ್ಯೋನ್ಮುಕವಾಗಲಿದೆ ಎಂದರು.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 55/180

## ಮಕ್ಕಳ ಹಕ್ಕುಗಳ ಕುರಿತು ದಕ್ಷಿಣ ಭಾರತ ಶಾಸಕರುಗಳ ಸಮ್ಮೇಳನ

**ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ) :**

ಜನಪ್ರತಿನಿಧಿಗಳಲ್ಲಿ ಮಕ್ಕಳ ಹಕ್ಕುಗಳ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ದಕ್ಷಿಣ ಭಾರತದ ವಿವಿಧ ರಾಜ್ಯಗಳ ಶಾಸಕರುಗಳಿಗೆ ವಿಕಾಸಸೌಧದಲ್ಲಿ ಒಂದು ದಿನದ ಸಮಾವೇಶವನ್ನು

ಸೆಪ್ಟೆಂಬರ್ 14 ರಂದು ಹಮ್ಮಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದ ಅವರ ಕೊಠಡಿಯಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ ಮಕ್ಕಳ ಹಕ್ಕುಗಳ ಕುರಿತು ಜಾಗತಿಕವಾಗಿ ಅರಿವು ಮೂಡಿಸುವ ಕಾರ್ಯ ಭರದಿಂದ ನಡೆಯುತ್ತಿದೆ. ಜನಪ್ರತಿನಿಧಿಗಳಲ್ಲಿ ಮಕ್ಕಳ ಹಕ್ಕುಗಳ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದ್ದು, ಇದರಲ್ಲಿ ಒಟ್ಟು 8 ರಾಜ್ಯಗಳ ಶಾಸಕರುಗಳು ಭಾಗವಹಿಸಲಿದ್ದಾರೆ ಎಂದರು.

ದಕ್ಷಿಣ ಭಾರತದಲ್ಲಿ ಮೊಟ್ಟ ಮೊದಲಬಾರಿ ಶಾಸಕರುಗಳಿಗಾಗಿ ಇಂತಹ ಸಮಾವೇಶವನ್ನು ಪ್ರಥಮ ಬಾರಿಗೆ ಹಮ್ಮಿಕೊಂಡಿದ್ದು, ಈ ಸಮಾವೇಶದಲ್ಲಿ ಆಂಧ್ರ, ಗೋವಾ, ಕೇರಳ, ತೆಲಂಗಾಣ, ಪುದುಚೇರಿ, ಮಹಾರಾಷ್ಟ್ರ ಮತ್ತು ತಮಿಳುನಾಡಿನ 50ಕ್ಕೂ ಹೆಚ್ಚು ಶಾಸಕರುಗಳು ಈಗಾಗಲೇ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ನೋಂದಾಯಿಸಿಕೊಂಡಿದ್ದು, ಈ ಸಮಾವೇಶದ ನಂತರ ರಾಷ್ಟ್ರಮಟ್ಟದ ಸಮಾವೇಶವನ್ನು ಸಹ ಹಮ್ಮಿಕೊಳ್ಳಲು ಯೋಜಿಸಲಾಗಿದೆ ಎಂದು ತಿಳಿಸಿದರು.

ಸರ್ಕಾರದ ಮುಖ್ಯ ಸಚೇತಕ ಐವಾನ್ ಡಿಸೋಜ್ ಅವರು ಮಾತನಾಡಿ ವಿವಿಧ ರಾಜ್ಯಗಳ ಮೇಲ್ಮನೆ ಮತ್ತು ಕೆಳಮನೆ ಶಾಸಕರುಗಳು, ಸಭಾಪತಿಗಳು ಸಹ ಈ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದು, ಕರ್ನಾಟಕದಿಂದ 30 ಕ್ಕೂ ಹೆಚ್ಚು ಶಾಸಕರು ನೋಂದಾಯಿಸಿಕೊಂಡಿದ್ದಾರೆ ಎಂದರು.

ಈ ಸಮಾವೇಶವನ್ನು ಮುಖ್ಯಮಂತ್ರಿಗಳು ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ವಿಧಾನ ಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನಸಭೆಯ ಸಭಾಪತಿ ಕೆ.ಬಿ. ಕೋಳಿವಾಡ, ಸಚಿವರುಗಳಾದ ಟಿ.ಬಿ. ಜಯಚಂದ್ರ ಮತ್ತು ಶ್ರೀಮತಿ ಉಮಾಶ್ರೀ ಹಾಗೂ ಯುನಿಸೆಫ್‌ನ ಭಾರತದ ಮುಖ್ಯಸ್ಥರಾದ ಡಾ. ಯಾಸ್ಮಿನ್ ಅಲಿ ಹಖ್ ಅವರು ಭಾಗವಹಿಸಲಿದ್ದಾರೆ. ಅಂದು ಸಂಜೆ ಸಮಾರೋಪ ಸಮಾರಂಭ ಸಹ ಅದೇ ಸ್ಥಳದಲ್ಲಿ ನಡೆಯಲಿದೆ ಎಂದರು.

ವಿರೋಧ ಪಕ್ಷದ ಮುಖ್ಯ ಸಚೇತಕ ಗಣೇಶ್ ಕಾರ್ಣಿಕ್ ಅವರು ಮಾತನಾಡಿ ಅಂದಿನ ಸಮಾವೇಶದಲ್ಲಿ ಮಕ್ಕಳ ಹಕ್ಕುಗಳ ವಿವಿಧ ವಿಷಯಗಳ ಕುರಿತು ತಜ್ಞರುಗಳು ವಿಷಯ ಮಂಡನೆ ಮಾಡಲಿದ್ದು ಸಂಜೆ ಸಮಾರೋಪ ಸಮಾರಂಭದಲ್ಲಿ ಬೆಂಗಳೂರು ಘೋಷಣೆಯನ್ನು ಘೋಷಿಸಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಶಾಸಕರುಗಳಾದ ಶರಣಪ್ಪ ಮಟ್ಟೂರು, ಚೌಡರೆಡ್ಡಿ ತೋಪಳ್ಳಿ ಅವರು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

# ಪರಿಸರ ರಕ್ಷಣೆ ಎಲ್ಲರ ಆದ್ಯ ಕರ್ತವ್ಯ : ಸಚಿವ ಪ್ರಮೋದ್ ಮಧ್ವರಾಜ್

ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ) :

ಪರಿಸರವನ್ನು ರಕ್ಷಣೆ ಮಾಡದಿದ್ದರೆ ಇಡೀ ಮನುಕುಲವು ಸಂಕಷ್ಟಕ್ಕೆ ಸಿಲುಕಲಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ಪ್ರಮೋದ್ ಮಧ್ವರಾಜ್ ಅವರು ತಿಳಿಸಿದರು.

ಅವರು ಇಂದು ನಗರದ ಚಿತ್ರಕಲಾ ಪರಿಷತ್‌ನಲ್ಲಿ ರಾಜ್ಯ ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಪರಿಸರ, ನಿಸರ್ಗ ಸಂರಕ್ಷಣಾ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಪರಿಸರ ಮನನ ಹಾಗೂ ಯೂತ್ ರೆಡ್‌ಕ್ರಾಸ್ ಸಂಯೋಜಕರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ಎಲ್ಲೆಡೆ ನೀರಿಗಾಗಿ ಆಹಾಕಾರ, ಯುದ್ಧ ನಡೆಯುತ್ತಿವೆ. ಮಾನವನ ದುರಾಸೆಯಿಂದ ಪ್ರಕೃತಿಯ ಗಿಡ ಮರಗಳು ನಾಶಗೊಳ್ಳುತ್ತಿವೆ. ನಾವು ಪ್ರಕೃತಿಯನ್ನು ರಕ್ಷಣೆ ಮಾಡದಿದ್ದರೆ, ಪ್ರಕೃತಿಯು ನಮ್ಮನ್ನು ರಕ್ಷಿಸುವುದಿಲ್ಲ. ಭೂತಾನ್‌ನಂತಹ ಸಣ್ಣ ರಾಷ್ಟ್ರ ಸಹ ಪರಿಸರಕ್ಕೆ ಹಾನಿ ಉಂಟುಮಾಡದೆ ಬೇಡಿಕೆಯ ವಸ್ತುಗಳನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತಿದೆ. ಸ್ವಾತಂತ್ರ್ಯದ ಸಂದರ್ಭದಲ್ಲಿ ಭಾರತದ ಒಟ್ಟು ಅರಣ್ಯ ವಿಸ್ತೀರ್ಣ ಶೇ 33 ರಷ್ಟಿದ್ದು, ಈಗ ಶೇ 7 ರಷ್ಟಿದೆ. ನಾವು ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಪರಿಸರ ರಕ್ಷಣೆ ಕುರಿತು ಪಠ್ಯವನ್ನು ಇಡಬೇಕು. ರಾಷ್ಟ್ರೀಯ ಸೇವಾ ಯೋಜನೆಗೆ ಈ ವರ್ಷ ಸರ್ಕಾರ 13.65 ಕೋಟಿ ರೂ ಅನುದಾನವನ್ನು ಮೀಸಲಿಟ್ಟಿದೆ ಎಂದರು.

ಕಾರ್ಯಕ್ರಮದಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಬಿ.ಕೆ. ರವಿ ಮಾತನಾಡಿ, ಬೆಂಗಳೂರು ವಿಶ್ವವಿದ್ಯಾಲಯ ಪರಿಸರ ಸಂರಕ್ಷಣೆಗೆ ಸಕ್ರಿಯವಾಗಿ ಕೆಲಸ

ನಿರ್ವಹಿಸುತ್ತಿದೆ. ವಿಶ್ವವಿದ್ಯಾಲಯ ಆವರಣದಲ್ಲಿ ಬಯೋಪಾರ್ಕ್ ನಿರ್ಮಾಣಗೊಂಡಿದ್ದು ಅಲ್ಲಿ ಸುಮಾರು 3 ಲಕ್ಷ ಗಿಡಗಳನ್ನು ಬೆಳಸಲಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಜಿ ಸಚಿವ ಹಾಗೂ ಚಿತ್ರಕಲಾ ಪರಿಷತ್ ಅಧ್ಯಕ್ಷ ಡಾ. ಬಿ.ಎಲ್. ಶಂಕರ್, ಪರಿಸರ ರಕ್ಷಣೆಗಾಗಿ ಹೋರಾಡಿದ ಸಾಹಿತಿ, ಛಾಯಾಗ್ರಾಹಕರಾದ ಪೂರ್ಣಚಂದ್ರ ತೇಜಸ್ವಿಯವರ ಹಾದಿಯಲ್ಲಿ ನಾವು ಸಾಗಬೇಕಾದ ಅವಶ್ಯಕತೆ ಇದೆ. ಮಕ್ಕಳಿಗೆ ಪರಿಸರ ಕುರಿತು ಪಠ್ಯವನ್ನು ಕಡ್ಡಾಯವಾಗಿ ತರಬೇಕು. ಎಲ್ಲರೂ ಪರಿಸರ ರಕ್ಷಣೆಗೆ ಪಣತೊಡಬೇಕೆಂದರು.

ಕಾರ್ಯಕ್ರಮದ ಅಂಗವಾಗಿ ಪೂರ್ಣಚಂದ್ರ ತೇಜಸ್ವಿಯವರ ಜೇಡಲೋಕ ಛಾಯಾಚಿತ್ರ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಭಾರತೀಯ ರೆಡ್‌ಕ್ರಾಸ್ ಸೊಸೈಟಿ ರಾಜಾಧ್ಯಕ್ಷರಾದ ಬಸರೂರ್ ರಾಜೀವ್ ಶೆಟ್ಟಿ, ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಡಾ. ಗಣನಾಥ ಶೆಟ್ಟಿ ಎಕ್ಕಾರು, ಪರಿಸರ, ನಿಸರ್ಗ ಸಂರಕ್ಷಣಾ ಸಂಸ್ಥೆಯ ಕಾರ್ಯದರ್ಶಿಗಳಾದ ಈಶ್ವರ ಪ್ರಸಾದ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ವಿಜಯ ಭಾಸ್ಕರ್ ಉಪಸ್ಥಿತರಿದ್ದರು.

ಎಸ್‌ಎಂ;ಜೆಡಿ:ಜಿಪಿಆರ್.